KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ದಿನಾಂಕ : DATE : 29/06/2019
ಇಲಾಖೆ / ವಿಷಯ: DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER :

### ನೂತನ ಆ್ಯಪ್ ಮೂಲಕ ಸರ್ವೆ ಮಾಡಲು ಸಚಿವ ಸಂಪುಟ ಸಭೆಯಲ್ಲಿ ಸರಕಾರದ ನಿರ್ಧಾರ

# ಬೆಳೆ ಮಾಹಿತಿ ನಿಖರ ಸಮೀಕ್ಷೆಗೆ ಸಮ್ಮತಿ

**■ ವಿಕ ಸುದ್ದಿಲೋಕ** ಬೆಂಗಳೂರು

ತಂತ್ರಜ್ಞಾನದ ನೆರವಿನಿಂದ ರಾಜ್ಯದ ನಾನಾ ಪ್ರದೇಶಗಳಲ್ಲಿ ಬೆಳೆಯುವ ಬೆಳೆಗಳ ನಿಖರ ಸಮೀಕ್ಷೆ ನಡೆಸುವ ಪ್ರಸ್ತಾಪಕ್ಕೆ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ.

ಶುಕ್ರವಾರ ನಡೆದ ಸಂಪುಟ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಈ ಉದ್ದೇಶಕ್ಕೆ ಆ್ಯಪ್ ಅಭಿವೃದ್ಧಿ ಪಡಿಸಲಾಗಿದೆ. ನೇರವಾಗಿ ರೈತರ ಹೊಲಕ್ಕೆ ಭೇಟಿ ನೀಡಿ ಸಮೀಕ್ಷೆ ಕೈಗೊಳ್ಳಲಾಗುತ್ತದೆ. ಈ ಬಾರಿ ಮುಂಗಾರಿನ ಜತೆಗೆ ಹಿಂಗಾರು ಬೆಳೆಯ ಸಮೀಕ್ಷೆಯೂ ಆಗಲಿದೆ ಎಂದು ಸಭೆ ಬಳಿಕ ಸುದ್ದಿಗೋಷ್ಠಿ ನಡೆಸಿದ ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.



ರಾಜ್ಯದಲ್ಲಿ 2.20 ಕೋಟಿ ರೈತರ ಪ್ಲಾಟ್‌ಗಳಿವೆ. ಈ ಪೈಕಿ ಎಲ್ಲಿ ಯಾವ ಬೆಳೆ ಬೆಳೆಯಲಾಗುತ್ತಿದೆ ಎಂಬ ಬಗ್ಗೆ ಸ್ಪಷ್ಟತೆಯಿಲ್ಲ. ಇಲ್ಲಿಯ ವರೆಗೆ ಅಂದಾಜಿನ ಮೇಲೆ ಸಮೀಕ್ಷೆ ಮಾಡಲಾಗುತ್ತಿದೆ. ಇದರಲ್ಲಿ ಅಂದಾಜಿಗೂ ವಾಸ್ತವಕ್ಕೂ ಶೇ.40 ರಿಂದ ಶೇ.300ರಷ್ಟು ವ್ಯತ್ಯಾಸ ಕಂಡು ಬರುತ್ತಿದೆ. ಉದಾಹರಣೆಗೆ 9.50 ಲಕ್ಷ ಹೆಕ್ಟೇರ್‌ನಲ್ಲಿ ತೊಗರಿ ಬೆಳೆಯುವ ಮಾಹಿತಿಯಿದೆ. ಆದರೆ, ವಾಸ್ತವದಲ್ಲಿ 14 ಲಕ್ಷ ಹೆಕ್ಟೇರ್ ವರೆಗೆ ಬೆಳೆಯಲಾಗುತ್ತಿದೆ. ಇಂಥ ವ್ಯತ್ಯಾಸವಾಗುವುದರಿಂದ ಖರೀದಿ ವ್ಯವಸ್ಥೆಗೂ ಸಮಸ್ಯೆಯಾಗುತ್ತದೆ. ಅಗತ್ಯ ನೆರವು ಕೋರಿ ಕೇಂದ್ರಕ್ಕೆ ಮನವಿ ಸಲ್ಲಿಸುವಾಗಲೂ ಸ್ಪಷ್ಟತೆಯಿರುವುದಿಲ್ಲ. ಆ್ಯಪ್ ಆಧಾರಿತ ಸಮೀಕ್ಷೆ ಇಂಥ ಸಮಸ್ಯೆಗಳಿಗೆ ಪರಿಹಾರ ನೀಡಲಿದೆ ಎಂದು ವಿವರಣೆ ನೀಡಿದರು.

ಉದ್ದೇಶಿತ ಆ್ಯಪ್‌ನಿಂದ ಸಮೀಕ್ಷೆ ಮಾಡಲು ಗ್ರಾಮೀಣ ಭಾಗದಲ್ಲಿ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದವರನ್ನು ನಿಯೋಜಿಸಿಕೊಳ್ಳಲಾಗುವುದು. 1 ಪ್ಲಾಟ್‌ನಲ್ಲಿ ಸಮೀಕ್ಷೆ ನಡೆಸಿದರೆ 10 ರೂ. ನೀಡಲಾಗುವುದು. ದಿನಕ್ಕೆ 10 ಪ್ಲಾಟ್‌ನಲ್ಲಿ ಸಮೀಕ್ಷೆ ನಡೆಸಬಹುದು. ಬೆಳೆ ಮಾಹಿತಿಯೊಂದಿಗೆ ಫೋಟೊವನ್ನು ಅಪ್ ಲೋಡ್ ಮಾಡಬೇಕಾಗುತ್ತದೆ. ಒಟ್ಟಾರೆ ಈ ಪ್ರಕ್ರಿಯೆಗೆ 90 ಕೋಟಿ ರೂ. ನೀಡಲಾಗುತ್ತಿದೆ. ದೇಶದಲ್ಲೇ ಮೊದಲ ಬಾರಿಗೆ ಇಂಥ ಯೋಜನೆ ಜಾರಿಗೊಳಿಸಲಾಗುತ್ತಿದ್ದು ನೀತಿ ಆಯೋಗ ಮೆಚ್ಚುಗೆ ವ್ಯಕ್ತಪಡಿಸಿದೆ. ಇತರ ರಾಜ್ಯಗಳಲ್ಲೂ ಅಳವಡಿಸಿಕೊಳ್ಳುವಂತೆ ಸೂಚನೆ ನೀಡುವ ಸಾಧ್ಯತೆಯಿದೆಯೆಂದು ಹೇಳಿದರು.

**ಮೈಸೂರು ಕುಡಿಯುವ ನೀರು ಯೋಜನೆಗೆ ಹೆಚ್ಚುವರಿ ನೆರವು**

ನರ್ಮ್ ಯೋಜನೆಯಡಿ ಕೈಗೆತ್ತಿಕೊಳ್ಳಲಾಗಿದ್ದ ಮೈಸೂರು ನಗರದ 24 ಗಿ 7 ಮಾದರಿ ಕುಡಿಯುವ ನೀರಿನ ಯೋಜನೆಗೆ ಪರಿಷ್ಕೃತ ಅಂದಾಜಿನಂತೆ 229.93 ಕೋಟಿ ರೂ. ನೀಡಲು ಒಪ್ಪಿಗೆ ಸೂಚಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.

ಹೇಮಾವತಿ ಬಲದಂಡೆ ನಾಲೆ ನವೀಕರಣಕ್ಕೆ (0.00 ಕಿ.ಮೀ.-92.104 ಕಿ.ಮೀ.) 422.75 ಕೋಟಿ ರೂ. ಒದಗಿಸಲು ಸಮ್ಮತಿಸಲಾಗಿದೆ. ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಪಾವಗಡದಲ್ಲಿ 60 ಹಾಸಿಗೆಯ ಹೆರಿಗೆ ಆಸ್ಪತ್ರೆ ನಿರ್ಮಾಣ, ರಾಯಚೂರು ಆಸ್ಪತ್ರೆಗೆ ಹೆಚ್ಚುವರಿ ಸೌಲಭ್ಯ, ದಾವಣಗೆರೆ, ಬಳ್ಳಾರಿಯಲ್ಲಿ ತಲಾ 100 ಹಾಸಿಗೆಯ ಹೆರಿಗೆ ಆಸ್ಪತ್ರೆ ನಿರ್ಮಿಸುವ 71.80 ಕೋಟಿ ರೂ. ಪ್ರಸ್ತಾವಕ್ಕೆ ಒಪ್ಪಿಗೆ ನೀಡಲಾಗಿದೆ ಎಂದರು.

## ಮೋಡ ಬಿತ್ತನೆ ಕಾರ್ಯಾಚರಣೆ ಸ್ಥಳ ಮೈಸೂರಿಗೆ ಶಿಫ್ಟ್

**ಬೆಂಗಳೂರು:** ಮೋಡ ಬಿತ್ತನೆ ಕಾರ್ಯಾಚರಣೆ ಸ್ಥಳ ಬೆಂಗಳೂರಿನಿಂದ ಮೈಸೂರಿಗೆ ಶಿಫ್ಟ್ ಆಗಿದೆ. ಈ ಮೊದಲು ಬೆಂಗಳೂರು ಹಾಗೂ ಹುಬ್ಬಳ್ಳಿ ಕೇಂದ್ರವಾಗಿಸಿಕೊಂಡು ಮೋಡ ಬಿತ್ತನೆ ಕೈಗೊಳ್ಳಲು ತೀರ್ಮಾನಿಸಲಾಗಿತ್ತು. ಇದೀಗ ಬೆಂಗಳೂರು ಬದಲು ಮೈಸೂರನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ಹುಬ್ಬಳ್ಳಿ ಕೇಂದ್ರವನ್ನು ಹಾಗೆಯೇ ಉಳಿಸಿಕೊಳ್ಳಲಾಗಿದೆ ಎಂದು ಸುದ್ದಿಗಾರರೊಂದಿಗೆ ಮಾತನಾಡಿದ ಗ್ರಾಮೀಣಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ, ಎಚ್‌ಎಎಲ್ ನಿಲ್ದಾಣ ಹಾಗೂ ವಾಯುಪಡೆಗೆ ಸಂಬಂಧಿಸಿದ ಯಲಹಂಕ ವಾಯುನೆಲೆಯಿದೆ. ಮೋಡ ಬಿತ್ತನೆ ಕಾರ್ಯಾಚರಣೆ ಪ್ರಾರಂಭಿಸುವಾಗ ಈ ಎಲ್ಲ ಸಂಸ್ಥೆಗಳಿಂದ ಸಿಗ್ನಲ್ ಪಡೆದುಕೊಳ್ಳಬೇಕು. ಸ್ವಲ್ಪ ವಿಳಂಬವಾದರೂ ಬಿತ್ತನೆ ಕೈಗೂಡುವುದಿಲ್ಲ. ಈ ವಿಚಾರವಾಗಿ ದಿಲ್ಲಿಯಲ್ಲಿನ ಉನ್ನತ ಮಟ್ಟದ ಸಭೆಯಲ್ಲಿ ಚರ್ಚಿಸಿದ ಬಳಿಕ ಮೈಸೂರನ್ನು ಆಯ್ಕೆ ಮಾಡಿಕೊಳ್ಳಲಾಗಿದೆ ಎಂದರು. ಜುಲೈ 2ನೇ ವಾರದ ಹೊತ್ತಿಗೆ ಮೋಡ ಬಿತ್ತನೆ ಮಾಡಲು ಸಿದ್ಧತೆಯಾಗುತ್ತಿದೆ. ಕೇಂದ್ರ ಸರಕಾರದ ಅನುಮತಿಯನ್ನೂ ನಿರೀಕ್ಷಿಸಲಾಗುತ್ತಿದೆ ಎಂದು ಹೇಳಿದರು.





## ಬೆಳೆ ವಿಮೆಗೆ 546.21 ಕೋಟಿ ರೂ.

ಫಸಲ್ ಬಿಮಾ ಯೋಜನೆಯಡಿ 2019-20 ನೇ ಸಾಲಿಗೆ ರಾಜ್ಯದ ಪಾಲಿನ 546.21 ಕೋಟಿ ರೂ. ನೀಡಲು ಸಂಪುಟ ಸಭೆ ಸಮ್ಮತಿ ನೀಡಿತು.

## ಹೆಚ್ಚುವರಿ 72 ವೈದ್ಯ ಪಿಜಿ ಸೀಟು

ರಾಜ್ಯದ 10 ಆಸ್ಪತ್ರೆಗಳಲ್ಲಿ ಸ್ನಾತಕೋತ್ತರ ವೈದ್ಯ ಪದವಿಗೆ ಹೆಚ್ಚುವರಿ 72 ಸೀಟು ಸೃಜಿಸಿ ವ್ಯಾಸಂಗಕ್ಕೆ ಅವಕಾಶ ಮಾಡಿಕೊಡಲಾಗುತ್ತದೆ. ಈ ಆಸ್ಪತ್ರೆಗಳಲ್ಲಿ ಕಾರ್ಯ ನಿರ್ವಹಿಸುವ ವೈದ್ಯರಿಗೆ ಸರಕಾರವೇ 30 ಸಾವಿರ ರೂ. ದಿಂದ 40 ಸಾವಿರ ರೂ. ವರೆಗೆ ಸ್ಟೈಫಂಡ್ ನೀಡಲಿದೆ. ಇದರಿಂದ ವೈದ್ಯ ಪಿಜಿ ಸೀಟುಗಳ ಹೆಚ್ಚಳದೊಂದಿಗೆ ರಾಜ್ಯಕ್ಕೆ ತಜ್ಞ ವೈದ್ಯರ ಸೇವೆ ಲಭ್ಯವಾದಂತಾಗಲಿದೆ. ಕೇಂದ್ರದ ಡಿಎನ್‌ಬಿ ನಿಯಮಾವಳಿ ಅನುಸಾರ ಈ ಕ್ರಮ ಕೈಗೊಳ್ಳಲಾಗುತ್ತಿದೆ. ಹೊಳೆನರಸೀಪುರ, ದೊಡ್ಡಬಳ್ಳಾಪುರ, ಗಂಗಾವತಿ, ಶಿರಾ, ಬಸವಕಲ್ಯಾಣ, ಹಾವೇರಿ, ಚಿಕ್ಕಬಳ್ಳಾಪುರ, ಯಾದಗಿರಿ, ಚಿಕ್ಕಮಗಳೂರು ಹಾಗೂ ದಕ್ಷಿಣ ಕನ್ನಡದ (ವೆನ್‌ಲಾಕ್) ಆಸ್ಪತ್ರೆಗಳನ್ನು ಈ ಉದ್ದೇಶಕ್ಕೆ ಆಯ್ಕೆ ಮಾಡಿಕೊಳ್ಳಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.



## ಎಸ್‌ಟಿ ಮೀಸಲು ಹೆಚ್ಚಳ: ವರದಿ ಸಲ್ಲಿಸಲು ಸೂಚನೆ

**ಬೆಂಗಳೂರು:** ಪರಿಶಿಷ್ಟ ಪಂಗಡದವರಿಗೆ ಮೀಸಲು ಪ್ರಮಾಣ ಹೆಚ್ಚಿಸುವ ಸಂಬಂಧ ಸೂಕ್ತ ಪರಾಮರ್ಶೆ ನಡೆಸಿ ವರದಿ ಸಲ್ಲಿಸುವಂತೆ ಸಚಿವ ಸಂಪುಟ ಸಭೆ ರಾಜ್ಯದ ಮುಖ್ಯ ಕಾರ್ಯದರ್ಶಿ ಅವರಿಗೆ ನಿರ್ದೇಶನ ನೀಡಿದೆ. ಎಸ್‌ಟಿ ಮೀಸಲನ್ನು ಶೇ.3 ರಿಂದ ಶೇ.7.5ಕ್ಕೆ ವಿಸ್ತರಿಸುವಂತೆ ಆಗ್ರಹಿಸಿ ಸಮುದಾಯದ ಜನಪ್ರತಿನಿಧಿಗಳು, ಧಾರ್ಮಿಕ ಮುಖಂಡರ ಬೃಹತ್ ಪ್ರತಿಭಟನೆ ನಡೆಸಿದ್ದರು. ಈ ಸಂಬಂಧ ಅಗತ್ಯ ಕ್ರಮ ಕೈಗೊಳ್ಳುವ ಭರವಸೆಯನ್ನು ಸರಕಾರ ನೀಡಿದೆ. ಈ ಹಿನ್ನೆಲೆಯಲ್ಲಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಅಧ್ಯಕ್ಷತೆಯಲ್ಲಿ ಶುಕ್ರವಾರ ನಡೆದ ಸಂಪುಟ ಸಭೆಯಲ್ಲಿ ಈ ಬಗ್ಗೆ ಚರ್ಚಿಸಲಾಯಿತು. ಆದರೆ, ಖಚಿತ ನಿರ್ಧಾರಕ್ಕೆ ಬರಲು ಸಾಧ್ಯವಾಗಲಿಲ್ಲ. ಸುಪ್ರೀಂಕೋರ್ಟ್ ಆದೇಶದಂತೆ ಮೀಸಲು ಪ್ರಮಾಣ ಶೇ.50 ಅನ್ನು ಮೀರಬಾರದು. ಇದರ ಸಾಧ್ಯಾಸಾಧ್ಯತೆಗಳ ಬಗ್ಗೆ ಮುಂದಿನ ಸಂಪುಟ ಸಭೆಗೆ ವರದಿ ಸಲ್ಲಿಸುವಂತೆ ಮುಖ್ಯ ಕಾರ್ಯದರ್ಶಿ ಅವರಿಗೆ ಕೇಳಿಕೊಳ್ಳಲಾಗಿದೆ ಎಂದು ಸಂಪುಟ ಸಭೆ ಬಳಿಕ ಸುದ್ದಿಗಾರರಿಗೆ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.